**1** ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,
ಚಿಕ್ಕಮಗಳೂರು

**<u>ಸ್ಪೆಷಲ್ ಮೊಕದ್ದಮೆ ನಂಃ 87/2017</u>**

| | | |
|---|---|---|
| ಸಾಕ್ಷಿದಾರರ ಹೆಸರು | - ರಫೀಕ್ ಎಂ | ಪಿಡಬ್ಲೂ -17 |
| ತಂದೆಯ ಹೆಸರು | - ಮುಜೀಬ್ | ಸಿಡಬ್ಲೂ -22 |
| ವಯಸ್ಸು | - 40 ವರ್ಷ | |
| ಉದ್ಯೋಗ | - ವೃತ್ತ ನಿರೀಕ್ಷಕರು, ಕಡೂರು ವೃತ್ತ | |
| ವಾಸ ಸ್ಥಳ | - ಕಡೂರು | |

ದಿನಾಂಕಃ 03-09-2025 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

<u>ಮುಖ್ಯ ವಿಚಾರಣೆಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ</u>

1. ದಿಃ 01-02-2017 ರಿಂದ ದಿಃ 10-08-2018 ರವರೆಗೆ ಮೂಡಿಗೆರೆ ಪೊಲೀಸ್ ಠಾಣೆಯಲ್ಲಿ ಆರಕ್ಷಕ ಉಪನಿರೀಕ್ಷಕನಾಗಿ ಕಾರ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 05-04-2017 ರಂದು ಫ್ರಾಸಾ.16 ರವರು ಮೂಡಿಗೆರೆ ಎಂ.ಜಿ.ಎಂ. ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಫ್ರಾಸಾ.1 ಶಶಿಕುಮಾರವರ ಹೇಳಿಕೆಯನ್ನು ಪಡೆದುಕೊಂಡು ಬಂದು ಮಧ್ಯಾಹ್ನ 2 ಗಂಟೆಗೆ ನನ್ನ ಮುಂದೆ ಹಾಜರು ಪಡಿಸಿದ್ದು ಸದರಿ ಹೇಳಿಕೆಯನ್ನು ಸ್ವೀಕರಿಸಿ ಅದರ ಮೇರೆಗೆ ಠಾಣಾ ಮೊಕದ್ದಮೆ ಸಂಖ್ಯೆ 68/2017 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ

ಹೇಳಿಕೆ ದೂರನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಸಿ) ಎಂದು ಗುರುತಿಸಲಾಯಿತು. ನಾನು ದಾಖಲು ಮಾಡಿದ ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ.38 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.38(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.23 ರವರಿಗೆ ನೀಡಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ ಹೆಚ್.ಎ.ಟಿ. ವಕೀಲರ ಪರವಾಗಿಃ</u>

3. ಫ್ರಾಸಾ.16 ರವರು ಫ್ರಾಸಾ.1 ರವರ ಹೇಳಿಕೆಯನ್ನು ನಿಪಿ.1 ರಂತೆ ಪಡೆದು ನಿಮ್ಮ ಮುಂದೆ ಹಾಜರು ಪಡಿಸಿದ್ದಾಗಿ ಹೇಳಿರುವುದು ಸುಳ್ಳು ಎಂದರೆ ಸರಿಯಲ್ಲ. ನೀವು ಪ್ರಕರಣದ ಕಡತವನ್ನು ಚಾಸಾ.23 ರವರಿಗೆ ನೀಡಲು ನಿಮಗೆ ಸೂಚನೆ ಇತ್ತೇ ಎಂದರೆ ಸಾಕ್ಷಿ ಪೊಲೀಸ್ ವರಿಷ್ಟಾಧಿಕಾರಿಗಳಿಂದ ಸೂಚನೆ ಇತ್ತು ಎನ್ನುತ್ತಾರೆ. ಯಾವ ದಿನಾಂಕ ನೀವು ಸದರಿ ಸೂಚನೆಯನ್ನು ಪಡೆದುಕೊಂಡಿದ್ದೀರಾ ಎಂದರೆ ಸಾಕ್ಷಿ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿದ್ದ ದಿನವೇ ಎನ್ನುತ್ತಾರೆ.ೃ ಸಾಕ್ಷಿ ಮುಂದುವರೆದು ಎಸ್.ಸಿ/ಎಸ್.ಟಿ ಕಾಯ್ದೆಯಡಿ ತನಿಖೆಯನ್ನು ನಡೆಸಲು ಕೇವಲ ಡಿ.ವೈ.ಎಸ್.ಪಿ. ರವರಿಗೆ ಅಧಿಕಾರ ಇದ್ದು ಕಾರಣ ನಾನು ಕಡತವನ್ನು ಅವರಿಗೆ ನೀಡಿದ್ದೇನೆ ಎನ್ನುತ್ತಾರೆ.

ಕಡತವನ್ನು ಚಾಸಾ.23 ರವರಿಗೆ ಹಸ್ತಾಂತರಿಸಿದ ಬಗ್ಗೆ ಠಾಣಾ ದಿನಚರಿಯಲ್ಲಿ ನಮೂದು ಮಾಡಲಾಗಿದೆ. ಯಾವ ಸಮಯಕ್ಕೆ ಕಡತವನ್ನು ಹಸ್ತಾಂತರಿಸಲಾಯಿತು ಎಂದು ಸದರಿ ದಿನಚರಿಯಲ್ಲಿ ನಮೂದಿಸಲಾಗಿದೆಯೇ ಎಂದರೆ ಸಾಕ್ಷಿ ಹೌದು ಎನ್ನುತ್ತಾರೆ. ನೀವು ಹೇಳಿದಂತೆ ಯಾವುದೇ ಕರ್ತವ್ಯವನ್ನು ನಿರ್ವಹಿಸದೇ ಇದ್ದರೂ ಸಹ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲ</u>

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-

(ಭಾನುಮತಿ ಬಿ.ಸಿ)

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಚಿಕ್ಕಮಗಳೂರು.

ಸಾಕ್ಷಿಯ ಸಹಿ